**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಐವನ್ ಡಿ' ಸೋಜಾ ರವರು ನಿಯಮ 330 ರಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಹೇಳಿಕೆ**

**ವಿಷಯ: ದಕ್ಷಿಣ ಕನ್ನಡ ಜಿಲ್ಲೆಯ ಹಳೆಯಂಗಡಿ ಗ್ರಾಮ ಪಂಚಾಯತ್ ಕಾನೂನು ಬದ್ಧವಾಗಿ ಕಾರ್ಯನಿರ್ವಹಿಸುತ್ತಿದ್ದರೂ, ಜಿಲ್ಲಾ ಪಂಚಾಯತ್ ದಿನಾಂಕ:16.09.2019 ರಂದು ಬರ್ಕಾಸ್ತು ಮಾಡಲು ನಿರ್ಣಯ ಕೈಗೊಂಡಿದ್ದು, ಈ ನಿರ್ಣಯವು ಪಂಚಾಯತ್ ರಾಜ್ ವ್ಯವಸ್ಥೆಯ ಮೇಲೆ ಅಗಾಧವಾದ ಪರಿಣಾಮ ಬೀರುವುದರಿಂದ ಜಿಲ್ಲಾ ಪಂಚಾಯತ್ ನಿರ್ಣಯದ ಬಗ್ಗೆ ಹಾಗೂ ಸರ್ಕಾರದ ನಿಲುವಿನ ಬಗ್ಗೆ.**

---

ಉತ್ತರ: ದಿನಾಂಕ: 27.06.2019 ರಂದು ನಡೆದ ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯಲ್ಲಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಜಿಲ್ಲಾ ಪಂಚಾಯತ್ ಸದಸ್ಯರು ಹಳೆಯಂಗಡಿ ಗ್ರಾಮ ಪಂಚಾಯತಿ ಅವ್ಯವಸ್ಥೆ ಬಗ್ಗೆ ಪ್ರಸ್ತಾಪ ಮಾಡಿ ಹಳೆಯಂಗಡಿ ಗ್ರಾಮ ಪಂಚಾಯತ್‌ನಲ್ಲಿ ಕಳೆದ ಸಾಲಿನ ಗ್ರಾಮ ಸಭೆ ನಡೆಯದೆ ಇರುವ ಬಗ್ಗೆ ಪ್ರಸಕ್ತ ಸಾಲಿನಲ್ಲಿ 6-7 ತಿಂಗಳಿನಿಂದ ಗ್ರಾಮ ಪಂಚಾಯತ್‌ನ ಸಾಮಾನ್ಯ ಸಭೆ ನಡೆದಿರುವುದಿಲ್ಲ ಎಂದು ಪ್ರಸ್ತಾಪಿಸಿರುತ್ತಾರೆ. ಸದರಿ ವಿಷಯದ ಬಗ್ಗೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಮಂಗಳೂರು ಇವರು ಕರ್ನಾಟಕ ಗ್ರಾಮ ಸ್ವರಾಜ್ ಹಾಗೂ ಪಂಚಾಯತ್‌ರಾಜ್ ಅಧಿನಿಯಮದಂತೆ ಕ್ರಮವಹಿಸಿ ವರದಿ ಒಪ್ಪಿಸಲು ಸೂಚಿಸಲಾಯಿತು.

ಮಂಗಳೂರು ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಯವರು ದಿನಾಂಕ 16.08.2019 ರಂದು ವರದಿಯನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ದಕ್ಷಿಣ ಕನ್ನಡ ರವರಿಗೆ ನೀಡಿದ್ದು, ಅವರ ವರದಿ ಪ್ರಕಾರ ದಿನಾಂಕ: 07.08.2019ರ ತಾಲ್ಲೂಕು ಪಂಚಾಯತಿ ಸಾಮಾನ್ಯ ಸಭೆಯ ನಿರ್ಣಯದಂತೆ ದಿನಾಂಕ: 08.08.2019 ರಂದು ಸದರಿ ಗ್ರಾಮ ಪಂಚಾಯತಿಯನ್ನು ಪರಿಶೀಲನೆ ನಡೆಸಿದಾಗ, ಮೇಲ್ನೋಟಕ್ಕೆ ಕರ್ನಾಟಕ ಗ್ರಾಮ ಸ್ವರಾಜ್ ಹಾಗೂ ಪಂಚಾಯತ್‌ರಾಜ್ ಅಧಿನಿಯಮ, 1993ರ ಪ್ರಕರಣ 52ರ ಪ್ರಕಾರ ನಿಗದಿತ ಸಮಯದಲ್ಲಿ ಸಾಮಾನ್ಯ ಸಭೆಗಳು ನಡೆದಿರುವುದಿಲ್ಲ. ಸಾಮಾನ್ಯ ಸಭೆ ಹಾಗೂ ಗ್ರಾಮ ಸಭೆಗಳು ನಿಯತಕಾಲಿಕವಾಗಿ ನಡೆಯದ ಕಾರಣ ಕರ್ನಾಟಕ ಗ್ರಾಮ ಸ್ವರಾಜ್ ಹಾಗೂ ಪಂಚಾಯತ್‌ರಾಜ್ ಅಧಿನಿಯಮ, 1993ರ ಪ್ರಕರಣ 268(3)ರಂತೆ ಸೂಕ್ತ ಕ್ರಮ ಕೈಗೊಳ್ಳಬಹುದಾಗಿದೆ ಎಂದು ವರದಿಯಲ್ಲಿ ತಿಳಿಸಿರುತ್ತಾರೆ.

ದಿನಾಂಕ: 16.09.2019ರಂದು ಜರುಗಿದ ಜಿಲ್ಲಾ ಪಂಚಾಯತಿ ಸಾಮಾನ್ಯ ಸಭೆಯಲ್ಲಿ ಈ ಬಗ್ಗೆ ಸುದೀರ್ಘ ಚರ್ಚೆ ನಡೆದಿದ್ದು, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್‌ರಾಜ್ ಅಧಿನಿಯಮ, 1993ರ ಪ್ರಕರಣ 268 ರಂತೆ ಹಳೆಯಂಗಡಿ ಗ್ರಾಮ ಪಂಚಾಯತಿಯನ್ನು ವಿಸರ್ಜಿಸಲು ನಿರ್ಣಯ ಕೈಗೊಂಡು, ಈ ಬಗ್ಗೆ ಮುಂದಿನ ಕ್ರಮ ಜರುಗಿಸಲು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರಿಗೆ ಸೂಚಿಸಲಾಗಿದೆ.

ದಿನಾಂಕ: 23.09.2019ರಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ದಕ್ಷಿಣ ಕನ್ನಡ ರವರು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್‌ರಾಜ್ ಅಧಿನಿಯಮ, 1993ರ ಪ್ರಕರಣ 268(3)ರಂತೆ ಮೇಲ್ಕಂಡ ಅಂಶಗಳನ್ನು ಪ್ರಸ್ತಾಪಿಸಿ ಹಳೆಯಂಗಡಿ ಗ್ರಾಮ ಪಂಚಾಯತ್ ಅಧ್ಯಕ್ಷರಿಗೆ ಪತ್ರ ಬರೆದು ಗ್ರಾಮ ಪಂಚಾಯತಿಯನ್ನು ವಿಸರ್ಜಿಸುವ ನಿರ್ಣಯದ ಬಗ್ಗೆ ತಮ್ಮ ವಿವರಣೆ ಅಥವಾ ಆಕ್ಷೇಪಣೆಗಳಿದ್ದಲ್ಲಿ ತಿಳಿಸಲು 7 ದಿನಗಳ ಕಾಲಾವಕಾಶ ನೀಡಲಾಗಿತ್ತು.

ದಿನಾಂಕ: 30.09.2019ರಂದು ಹಳೆಯಂಗಡಿ ಗ್ರಾಮ ಪಂಚಾಯತ್ ಅಧ್ಯಕ್ಷರು ತಮ್ಮ ಸಮಜಾಯಿಷಿಯನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ದಕ್ಷಿಣ ಕನ್ನಡ ರವರಿಗೆ ಸಲ್ಲಿಸಿದ್ದು, ಅವರ ಪ್ರಕಾರ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಕರ್ತವ್ಯ ನಿರ್ಲಕ್ಷ್ಯತನ ಹಾಗೂ ಅಸಹಕಾರದಿಂದ ಸಭೆ ನಡೆಸಲು ಸಾಧ್ಯವಾಗಿಲ್ಲವೆಂದು ತಿಳಿಸಿ ಗ್ರಾಮ ಪಂಚಾಯತಿಯನ್ನು ವಿಸರ್ಜಿಸುವ ನಿರ್ಣಯವನ್ನು ಕೈ ಬಿಡಲು ಕೋರಿರುತ್ತಾರೆ. ಪ್ರಕರಣದ ಪ್ರಸ್ತುತ ಹಂತವು ಹೀಗಿರುತ್ತದೆ.

ಸಂ. ಗ್ರಾಅಪ 813 ಗ್ರಾಪಂಅ 2019

(ಕೆ.ಎಸ್.ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು